# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2019-20ನೇ ಸಾಲಿನ ಮೀನುಗಾರಿಕೆ ಇಲಾಖೆಯ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ಅಡಿಯಲ್ಲಿ ತೃತೀಯ ಕಂತಿನ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:-
1) ಆದೇಶ ಸಂಖ್ಯೆ: ಪಸಂಮೀ/52/ಮೀಇಯೋ/2019, ದಿನಾಂಕ: 15-04-2019.
2) ಆದೇಶ ಸಂಖ್ಯೆ: ಪಸಂಮೀ/59/ಮೀಇಯೋ/2019, ದಿನಾಂಕ: 04-05-2019
3) ಆದೇಶ ಸಂಖ್ಯೆ: ಪಸಂಮೀ/ಇ-54/ಮೀಇಯೋ/2019, ದಿನಾಂಕ: 08-08-2019.
4) ಪತ್ರ ಸಂಖ್ಯೆ: ಮೀನಿ/ಆಯವ್ಯಯ/11/2019, ದಿನಾಂಕ: 05-10-2019.
5) ಆದೇಶ ಸಂಖ್ಯೆ: ಎಫ್‌ಡಿ/1/ಟಿಎಫ್‌ಪಿ/2019, ದಿನಾಂಕ: 04-07-2019.

******

## ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಆದೇಶದಲ್ಲಿ ಮೀನುಗಾರಿಕೆ ಇಲಾಖೆಯಲ್ಲಿ ಚಾಲ್ತಿಯಲ್ಲಿರುವ ವಿವಿಧ ರಾಜ್ಯ ವಲಯ, ಕೇಂದ್ರ ವಲಯ ಮತ್ತು ಕೇಂದ್ರ ಪುರಸ್ಕೃತ ಜಿಲ್ಲಾ ಪಂಚಾಯತ್ ಯೋಜನೆಗಳನ್ನು ಸಂಬಂಧಪಟ್ಟ ಹುದ್ದೆಗಳೊಂದಿಗೆ 2019-20ನೇ ಸಾಲಿಗೆ ಮುಂದುವರೆಸಲಾಗಿದೆ.

ಮೇಲೆ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ಓದಲಾದ ಆದೇಶಗಳಲ್ಲಿ, ಕ್ರಮವಾಗಿ ಪ್ರಥಮ ಕಂತಿನ ಅನುದಾನ ರೂ.6,112.00 ಲಕ್ಷಗಳನ್ನು ಮತ್ತು ದ್ವಿತೀಯ ಕಂತಾಗಿ ರೂ.5,944.52 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು ಇವರ ಪತ್ರದಲ್ಲಿ, 2019-20ನೇ ಸಾಲಿನ ಲೆಕ್ಕ ಶೀರ್ಷಿಕೆ 2405-ಮೀನುಗಾರಿಕೆ ಹಾಗೂ 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು ರಾಜ್ಯ ವಲಯದ ಅಡಿಯಲ್ಲಿ ಅನುಬಂಧದಲ್ಲಿ ನೀಡಿರುವ ಮಾಹಿತಿಯನ್ನು ರೂ.5999.02 ಲಕ್ಷಗಳ ತೃತೀಯ ಕಂತಿನ ಅನುದಾನವನ್ನು ಬಿಡುಗಡೆಗೊಳಿಸಲು ಕೋರಿರುತ್ತಾರೆ.

ಮೀನುಗಾರಿಕೆ ನಿರ್ದೇಶಕರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯವಲಯದ ಯೋಜನೆಗಳಡಿ ತೃತೀಯ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿ, ಕೆಳಕಂಡಂತೆ ಆದೇಶಿಸಿದೆ.

**ಆದೇಶ ಸಂಖ್ಯೆ: ಪಸಂಮೀ ಇ-104 ಮೀಇಯೋ 2019, ಬೆಂಗಳೂರು ದಿನಾಂಕ: 24-10-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2019-20ನೇ ಸಾಲಿನಲ್ಲಿ ಮೀನುಗಾರಿಕೆ ಇಲಾಖೆಯ ಯೋಜನೆಗಳನ್ನು ಅನುಷ್ಠಾನಗೊಳಿಸಲು ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಹಾಗೂ "4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳು" ರಾಜ್ಯವಲಯದಡಿ ರೂ. 4512.02 ಲಕ್ಷ (ನಾಲ್ಕು ಸಾವಿರದ ಐನೂರ ಹನ್ನೆರಡು ಲಕ್ಷದ

ಎರಡು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಕೆಳಕಂಡಂತೆ ಲೆಕ್ಕ ಶೀರ್ಷಿಕೆಗಳ ಮುಂದೆ ನಮೂದಿಸಿರುವಂತೆ ತೃತೀಯ ಕಂತಿನ ಅನುದಾನ ಬಿಡುಗಡೆ ಮಾಡಿದೆ.

(ರೂ.ಲಕ್ಷಗಳಲ್ಲಿ)

| ಕ್ರ ಸಂ | ಯೋಜನೆಯ ಹೆಸರು | ಲೆಕ್ಕ ಶೀರ್ಷಿಕೆ | ಆಯವ್ಯಯ 2019-20ರಲ್ಲಿ ಒದಗಿಸಿದ ಅನುದಾನ | 2019-20ರಲ್ಲಿ ತೃತೀಯ ಕಂತಿನಲ್ಲಿ ಬಿಡುಗಡೆ ಮಾಡಬೇಕಾದ ಅನುದಾನ |
|---|---|---|---|---|
| SO1 | ಆಡಳಿತ ಮತ್ತು ನಿರ್ದೇಶನ | **2405-00-001-0-01** | 2593.00 | **648.25** |
| SO2 | ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ | **2405-00-101-0-03** | | |
| | ಸಹಾಯಧನ | **106** | 519.00 | – |
| | | **59** | 200.00 | – |
| SO3 | ಜಲಾಶಯಗಳಲ್ಲಿ ಮೀನುಮರಿ ಬಿತ್ತನೆ | **2405-00-101-0-54** | | |
| | ಸಾಮಾನ್ಯ ವೆಚ್ಚಗಳು | **,051** | 150.00 | – |
| SO4 | ನೀಲಿಕ್ರಾಂತಿ ಸಮಗ್ರ ಅಭಿವೃದ್ಧಿ ಮತ್ತು ನಿರ್ವಹಣೆ ಕೇಂಪುಯೋ | **2405-00-101-0-58** | 100.00 | – |
| SO5 | ಅನುಸೂಚಿತ ಜಾತಿಗಳ ಉಪ ಯೋಜನೆ | **2405-00-101-0-66** | | |
| | ಪರಿಶಿಷ್ಠ ಜಾತಿ ಉಪ ಯೋಜನೆ | **422** | 0.73 | 0.1825 |
| | ಗಿರಿಜನ ಉಪ ಯೋಜನೆ | **423** | 0.31 | 0.0775 |
| | | | 1.04 | **0.26** |
| SO6 | ಉತ್ತರ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ಕೇಂದ್ರ ಸ್ಥಾಪನೆ | **2405-00-101-0-67** | 100.00 | **25.00** |
| SO7 | ಸಂಕಷ್ಟ ಪರಿಹಾರ ನಿಧಿ | **2405-00-103-0-15** | 1.00 | **0.25** |
| SO8 | ಸಾಂಪ್ರದಾಯಿಕ ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು | **2405-00-103-0-17** | | |
| | ಸಹಾಯಧನ | **106** | 1307.00 | 326.75 |
| | ಪರಿಶಿಷ್ಠ ಜಾತಿ ಉಪ ಯೋಜನೆ | **422** | 34.00 | 8.50 |
| | | | 1341.00 | **335.25** |
| SO9 | ಡಿಸೇಲ್ ತೆರಿಗೆ ವಿನಾಯಿತಿ | **2405-00-103-0-23** | | |
| | ಇತರೆ ವೆಚ್ಚಗಳು | **,059** | 13365.00 | 3341.25 |
| | ಪರಿಶಿಷ್ಠ ಜಾತಿ ಉಪ ಯೋಜನೆ | **422** | 135.00 | – |
| | | | 13500.00 | **3341.25** |

| | | | | |
|---|---|---|---|---|
| SO10 | ಮೀನು ಮಾರುಕಟ್ಟೆ ನಿರ್ಮಾಣಕ್ಕೆ ಸಹಾಯ | **2405-00-105-0-09** | | |
| | ಸಹಾಯಧನ | **106** | 75.00 | 18.75 |
| SO11 | ಮೀನುಗಾರಿಕೆ ಸಲಕರಣೆ ಕಿಟ್ಟುಗಳ ವಿತರಣೆ | **2405-00-110-0-02** | 500.00 | – |
| SO12 | ಮಂಜುಗಡ್ಡೆ ಸ್ಥಾವರ ಉಪಯೋಗಿಸುವ ವಿದ್ಯುತ್ ಮೇಲೆ ಸಹಾಯಧನ | **2405-00-110-0-03** | 400.00 | **100.00** |
| SO13 | ಮೀನುಗಾರಿಕೆ ಸಹಕಾರಿ ಸಂಸ್ಥೆಗಳು /ಮೀನುಗಾರರ ಕಲ್ಯಾಣ | **2405-00-120-0-07** | | |
| | ಅಂಶದಾನಗಳು | **104** | 1.00 | – |
| | ಸಹಾಯಧನ | **106** | 13.00 | – |
| | | | **14.00** | – |
| SO14 | ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು | **2405-00-195-0-01** | 151.04 | **37.76** |
| SO15 | ಕರಾವಳಿ ಕೂಡು ರಸ್ತೆಗಳ ನಿರ್ವಹಣೆ | **2405-00-337-0-01** | 150.00 | – |
| SO16 | ಗಿರಿಜನ ಪ್ರದೇಶ ಉಪಯೋಜನೆ | **2405-00-796-0-00** | 40.00 | **10.00** |
| | **2405-ಒಟ್ಟು** | | **19835.08** | **4491.77** |
| SOA-1 | ಮೀನುಗಾರಿಕೆ ಬಂದರುಗಳ ಮತ್ತು ಇಳಿದಾಣ ಕೇಂದ್ರಗಳ ನವೀಕರಣ | **4405-00-104-0-02** | | |
| | ಸಹಾಯಧನ | **386** | | |
| | | **(ಕೇಂದ್ರದ ಪಾಲು)** | | |
| | | **(ರಾಜ್ಯದ ಪಾಲು)** | 2653.00 | – |
| | ಪರಿಶಿಷ್ಟ ಜಾತಿ ಉಪ ಯೋಜನೆ | **422** | 81.00 | 20.25 |
| | ಗಿರಿಜನ ಉಪ ಯೋಜನೆ | **423** | 20.00 | – |
| | | | 2754.00 | **20.25** |
| SOA-2 | ಮೀನುಗಾರಿಕೆ ಕೊಂಡಿ ರಸ್ತೆಗಳು, ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ- ನಬಾರ್ಡ್ ಸಹಾಯ | **4405-00-800-2-03** | 1921.00 | – |
| | **4405-ಒಟ್ಟು** | | **4677.00** | **20.25** |
| | | | | |
| | | **ಒಟ್ಟು** | **24510.08** | **4512.02** |

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ಅನುದಾನದ ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಉಪಯೋಗಿಸಿಕೊಂಡು ಕಡ್ಡಾಯವಾಗಿ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು. ಫಲಾನುಭವಿಗಳ ಆಯ್ಕೆಯನ್ನು ಪಾರದರ್ಶಕತೆಯಿಂದ ಮಾಡತಕ್ಕದ್ದು. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು 2000ಗಳನ್ನು ಹಾಗೂ ಖರೀದಿ ನಿಯಮಗಳನ್ನು ಪಾಲಿಸತಕ್ಕದ್ದು ಮತ್ತು ಆರ್ಥಿಕ ಇಲಾಖೆಯ ಅಧಿಸೂಚನೆ ಸಂಖ್ಯೆ: ಖ2/ಪಿಎಂಯು/92/2015-16, ದಿನಾಂಕ: 27-03-2018ರ ಕ್ರಮ ಸಂಖ್ಯೆ 01 ರಿಂದ 04 ರಲ್ಲಿ ಸೂಚಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು. ಹಾಗೂ ಆದೇಶವನ್ನು ವೆಬ್‌ಸೈಟ್‌ನಲ್ಲಿ ಹಾಕುವುದು.

ಸರ್ಕಾರದ ಆದೇಶ ಸಂಖ್ಯೆ: ಪಸಂಮೀ/52/ಮೀಇಯೋ/2019, ದಿನಾಂಕ: 15-04-2019 ರನ್ವಯ ಮುಂದುವರೆಸಲಾದ ಯೋಜನೆಗಳನ್ನು ಅನುಮೋದಿಸಿರುವಂತೆ ಅನುಷ್ಠಾನಗೊಳಿಸತಕ್ಕದ್ದು.

ಸದರಿ ವೆಚ್ಚವನ್ನು 2019-20ನೇ ಸಾಲಿನ ಲೆಕ್ಕ ಶೀರ್ಷಿಕೆ "2405-ಮೀನುಗಾರಿಕೆ" ಮತ್ತು 4405-ಮೀನುಗಾರಿಕೆ ಮೇಲಣ ಬಂಡವಾಳ ವೆಚ್ಚಗಳಡಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/1/ಟಿಎಫ್‌ಪಿ/2019, ದಿನಾಂಕ: 04-07-2019 ರಲ್ಲಿ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಹೊರಡಿಸಲಾಗಿದೆ. ಹಾಗೂ ಸುತ್ತೋಲೆ ಸಂಖ್ಯೆ: ಎಫ್‌ಡಿ/01/ಟಿಎಫ್‌ಪಿ/2019, ದಿನಾಂಕ: 20-08-2019 ರಲ್ಲಿ ನಮೂದಿಸಿರುವ ಷರತ್ತು ಮತ್ತು ನಿಯಮಗಳನ್ನು ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/10/19

(ರಶ್ಮಿ ಶ್ರೀಕಾಂತ ಗಜರೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ
(ಮೀನುಗಾರಿಕೆ)

4/10/19

**ಇವರಿಗೆ:**

1) ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)(ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಮೀನುಗಾರಿಕೆ ನಿರ್ದೇಶಕರು, ಬೆಂಗಳೂರು.
4) ಜಂಟಿ ನಿರ್ದೇಶಕರು, ಖಜಾನೆ ಗಣಕ ಜಾಲ ನಿರ್ವಹಣಾ ಕೇಂದ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
5) ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ, ತೋಟಗಾರಿಕೆ ಮತ್ತು ಪಸಂಮೀ ಇಲಾಖೆ.
6) ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4), ವಿಧಾನಸೌಧ, ಬೆಂಗಳೂರು.
7) ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
8) ಸಂಬಂಧಪಟ್ಟವರುಗಳಿಗೆ ಮೀನುಗಾರಿಕೆ ನಿರ್ದೇಶಕರ ಮುಖಾಂತರ.
9) ಶಾಖಾ ರಕ್ಷಾ ಕಡತ / ಹೆಚ್ಚಿನ ಪ್ರತಿಗಳು / ಸಮನ್ವಯ-ಕಂಪೆಂಡಿಯಂ.